# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ ಹೊಂಬೇಗೌಡನಗರ ಉಪವಿಭಾಗ,**
**ಬೃ.ಬೆಂ.ಮ.ಪಾಲಿಕೆ 7ನೇ ಅಡ್ಡರಸ್ತೆ, 7ನೇ ಮುಖ್ಯರಸ್ತೆ, ಜಯನಗರ 2ನೇ ಬ್ಲಾಕ್ ಬೆಂಗಳೂರು**

ಸಂಖ್ಯೆ:ಸ.ಇಂ/ವಾ-153/ವಾರ್ಡ್ ಸಭೆ/2020-21 ದಿನಾಂಕ:22/03/2021

## ವಾರ್ಡ್ -153ರ ವಾರ್ಡ್ ಸಭೆಯ ನಡವಳಿ

ದಿನಾಂಕ:22/03/2021 ರಂದು ಹೊಂಬೇಗೌಡನಗರ ಉಪವಿಭಾಗ ವಾರ್ಡ್-153ರ ವಾರ್ಡ್ ಕಛೇರಿಯಲ್ಲಿ ಶ್ರೀಮತಿ. ವರಲಕ್ಷ್ಮಮ್ಮ ಎಲ್. ಸಹಾಯಕ ಆಯುಕ್ತರು, (ಆಡಳಿತ) ದಕ್ಷಿಣ ವಲಯ ವಾರ್ಡ್ 153ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

| ಕ್ರಮ ಸಂಖ್ಯೆ | ಅಧಿಕಾರಿಯವರ ಹೆಸರು | ಪದನಾಮ/ಇಲಾಖೆ | ಹಾಜರಾತಿ |
|---|---|---|---|
| 1 | ಶ್ರೀ. ವರಲಕ್ಷ್ಮಮ್ಮ ಎಲ್. | ಸಹಾಯಕ ಆಯುಕ್ತರು (ಆಡಳಿತ) ದಕ್ಷಿಣ ವಲಯ | ಹಾಜರಿದ್ದರು |
| 2 | ಶ್ರೀ. ನರಸಿಂಹಯ್ಯ ಎನ್. | ಕಿರಿಯ ಅಭಿಯಂತರರು ವಾರ್ಡ್-153-ಜಯನಗರ | ಹಾಜರಿದ್ದರು |
| 3 | ಶ್ರೀ. ರವೀಂದ್ರ ಹಿಜೇರಿ | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್-153 | ಹಾಜರಿದ್ದರು |
| 4 | ಶ್ರೀ. ವಿದ್ಯಾಧರ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್-153 | ಹಾಜರಿದ್ದರು |

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಪದನಾಮ | ಹಾಜರಾತಿ |
|---|---|---|---|
| 1 | ಶ್ರೀ. ಲಕ್ಷ್ಮೀಶ | ಸದಸ್ಯರು | ಹಾಜರಿದ್ದರು |
| 2 | ಶ್ರೀಮತಿ. ಪ್ರಮೀಳಾ | ಸದಸ್ಯರು | ಹಾಜರಿದ್ದರು |
| 3 | ಶ್ರೀಮತಿ. ಶಾನ್ ಅಹಮದ್ | ಸದಸ್ಯರು | ಹಾಜರಿದ್ದರು |

ಮು.ಪಿ.ನೋ..



Scanned with CamScanner

| ಕ್ರಮ ಸಂಖ್ಯೆ | ಸ್ಥಳೀಯರ ಹೆಸರು | ವಿವರ | ಹಾಜರಾತಿ |
|---|---|---|---|
| 1 | ಶ್ರೀ. ಪ್ರದೀಪ್ ಮೆಡೋನ | ಸ್ಥಳೀಯರು | ಹಾಜರಿದ್ದರು |
| 2 | ಶ್ರೀ. ಹನುಮಂತೇಗೌಡ | ಸ್ಥಳಿಯರು | ಹಾಜರಿದ್ದರು |
| 3 | ಶ್ರೀ. ಮೊಹಮ್ಮದ್ ಸಲಾವುಬಿನ್ | ಸ್ಥಳಿಯರು | ಹಾಜರಿದ್ದರು |
| 4 | ಶ್ರೀ. ಕಮಲ್ | ಸ್ಥಳಿಯರು | ಹಾಜರಿದ್ದರು |
| 5 | ಶ್ರೀ. ಅನೀಸ್ ಅಹಮದ್ | ಸ್ಥಳಿಯರು | ಹಾಜರಿದ್ದರು |

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು/ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ನಿಗಧಿತ ಸಮಯಕ್ಕೆ ಪ್ರಾರಂಭಿಸಲಾಯಿತು. ಸಭೆಯಲ್ಲಿ ಹಾಜರಿದ್ದ ಶ್ರೀಮತಿ. ವರಲಕ್ಷ್ಮ ಎಲ್. ಸಹಾಯಕ ಆಯುಕ್ತರು (ಆಡಳಿತ) ರವರು ಹಿಂದಿನ ಸಭೆಯಲ್ಲಿ ನಡೆದ ವಿಷಯಗಳ ಬಗ್ಗೆ ಮತ್ತೊಮ್ಮೆ ಚರ್ಚಿಸಿದರು ವಿವರಗಳು ಈ ಕೆಳಕಂಡಂತಿವೆ.

1. **ವಾರ್ಡಿನಲ್ಲಿ ಘನತ್ಯಾಜ್ಯ ನಿರ್ವಹಣೆಯ ಬಗ್ಗೆ:-**

- ಸಭೆಯಲ್ಲಿ ಹಾಜರಿದ್ದ ಸ್ಥಳೀಯರಾದ ಶ್ರೀ. ಹನುಮಂತೇಗೌಡ, ರವರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ 10ನೇ "ಡಿ" ಮುಖ್ಯರಸ್ತೆಯಲ್ಲಿ ಪೌರಕಾರ್ಮಿಕರು ಸಮರ್ಪಕವಾಗಿ ಕೆಲಸ ನಿರ್ವಹಿಸುತ್ತಿಲ್ಲವೆಂದು ತಿಳಿಸಿದರು. ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷಕರು ಉತ್ತರಿಸಿ ಕೂಡಲೇ ಈ ಬಗ್ಗೆ ಕ್ರಮ ವಹಿಸುವುದಾಗಿ ತಿಳಿಸಿದರು.
- ಸಭೆಯಲ್ಲಿ ಹಾಜರಿದ್ದ ಸದಸ್ಯರಾದ ಶ್ರೀಮತಿ. ಶಾನ್ ಅಹಮದ್ ರವರು ಮಾತನಾಡಿ ಮೊಹಮ್ಮಡನ್ ಬ್ಲಾಕ್‌ನಲ್ಲಿ ಸಮರ್ಪಕವಾಗಿ ಕಸ ಗುಡಿಸುವಿಕೆ ಹಾಗೂ ಕಸ ವಿಲೇವಾರಿ ನಡೆಯುತ್ತಿಲ್ಲವೆಂದು ತಿಳಿಸಿದರು. ಈ ಬಗ್ಗೆ ಉತ್ತರಿಸಿದ ಕಿರಿಯ ಆರೋಗ್ಯ ಪರಿವೀಕ್ಷಕರು ಈ ಬಗ್ಗೆ ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

2. **ಬೆಸ್ಕಾಂ ವಿಭಾಗ :-**

- ಸಭೆಯಲ್ಲಿ ಹಾಜರಾಗಿದ್ದ ಸದಸ್ಯರಾದ ಶ್ರೀಮತಿ. ಶಾನ್ ಅಹಮದ್ ರವರು ಮಾತನಾಡಿ ಮೊಹಮ್ಮಡನ್ ಬ್ಲಾಕ್‌ನಲ್ಲಿ ಬಿದ್ದಿರುವ ವಿದ್ಯುತ್ ಕಂಬಗಳನ್ನು ತೆರವುಗೊಳಿಸುವಂತೆ ಕೋರಿದರು ಹಾಗೂ ಸ್ಟ್ರೀಟ್ ಲೈಟ್‌ನ ಸ್ವಿಚ್‌ಗಳನ್ನು ಪರಿಶೀಲಿಸಿ ಬದಲಾಯಿಸುವಂತೆ ಕೋರಿದರು. ಈ ವಿಷಯವಾಗಿ ಅಧ್ಯಕ್ಷರು ಸಂಬಂಧಪಟ್ಟ ಇಲಾಖೆಯವರಿಗೆ ಸೂಕ್ತ ಕ್ರಮ ವಹಿಸಲು ನಿರ್ದೇಶನ ನೀಡುವುದಾಗಿ ಸಭೆಗೆ ತಿಳಿಸಿದರು.



Scanned with CamScanner

3. <u>ಕಾಮಗಾರಿ ವಿಭಾಗದ ಬಗ್ಗೆ:-</u>

- ಸಭೆಯಲ್ಲಿ ಹಾಜರಾಗಿದ್ದ ಸ್ಥಳೀಯರಾದ ಶ್ರೀ. ಪ್ರದೀಪ್ ಮೆಡೋನ ರವರು ಮಾತನಾಡಿ ಮಳೆ ನೀರು ಇಂಗು ಗುಂಡಿಗಳನ್ನು ನಿರ್ಮಿಸಲು ಕೋರಿದರು. ಈ ವಿಷಯವಾಗಿ ಸಭೆಯಲ್ಲಿ ಹಾಜರಿದ್ದ ವಾರ್ಡಿನ ಅಭಿಯಂತರರು ಉತ್ತರಿಸಿ ವಾರ್ಡ್ ವ್ಯಾಪ್ತಿಯಲ್ಲಿ ಸ್ಥಳಗಳನ್ನು ಗುರುತಿಸಿಕೊಂಡು ಮಳೆನೀರು ಇಂಗು ಗುಂಡಿಗಳನ್ನು ನಿರ್ಮಿಸಲಾಗುವುದೆಂದು ಸಭೆಗೆ ತಿಳಿಸಿದರು.
- ಸಭೆಯಲ್ಲಿ ಹಾಜರಾಗಿದ್ದ ಸ್ಥಳೀಯರಾದ ಶ್ರೀ. ಪ್ರದೀಪ್ ಮೆಡೋನ ರವರು ಮಾತನಾಡಿ ಬಿ.ಹೆಚ್.ಇ.ಎಲ್ ಲೇಔಟ್‌ನ ಉದ್ಯಾನವನದ ಕಾಮಗಾರಿಯ ವಿವರ ಕೋರಿದರು. ಈ ವಿಷಯವಾಗಿ ವಾರ್ಡಿನ ಅಭಿಯಂತರರು ಉತ್ತರಿಸಿ ಸಂಬಂಧಪಟ್ಟ ಇಲಾಖೆಯಿಂದ ವಿವರಗಳನ್ನು ಪಡೆದು ನೀಡಲಾಗುವುದೆಂದು ತಿಳಿಸಿದರು.
- ಸಭೆಯಲ್ಲಿ ಹಾಜರಾಗಿದ್ದ ಮೊಹಮ್ಮದ್ ಸಲಾಹುಬಿನ್ ರವರು ಮಾತನಾಡಿ ಬಿ.ಎಹೆಚ್.ಇ.ಎಲ್ ಲೇಔಟ್‌ನಲ್ಲಿ ಮಳೆ ನೀರು ಇಂಗು ಗುಂಡಿಗಳನ್ನು ನಿರ್ಮಿಸಲು ಕೋರಿದರು. ಈ ವಿಷಯವಾಗಿ ಸಭೆಯಲ್ಲಿ ಹಾಜರಿದ್ದ ವಾರ್ಡಿನ ಅಭಿಯಂತರರು ಉತ್ತರಿಸಿ ವಾರ್ಡ್ ವ್ಯಾಪ್ತಿಯಲ್ಲಿ ಸ್ಥಳಗಳನ್ನು ಗುರುತಿಸಿಕೊಂಡು ಮಳೆನೀರು ಇಂಗು ಗುಂಡಿಗಳನ್ನು ನಿರ್ಮಿಸಲಾಗುವುದೆಂದು ಸಭೆಗೆ ತಿಳಿಸಿದರು.
- ಸಭೆಯಲ್ಲಿ ಹಾಜರಾಗಿದ್ದ ಮೊಹಮ್ಮದ್ ಸಲಾಹುಬಿನ್ ರವರು ಮಾತನಾಡಿ ಬಿ.ಎಹೆಚ್.ಇ.ಎಲ್ ಲೇಔಟ್‌ನ 1ನೇ ಮುಖ್ಯರಸ್ತೆಯಲ್ಲಿ ಸ್ಟ್ರಾಪ್ ಗೋಡೋನ್ ಅನ್ನು ತೆರವುಗೊಳಿಸಲು ಕೋರಿದರು. ಈ ವಿಷಯವಾಗಿ ಸಭೆಯಲ್ಲಿ ಹಾಜರಿದ್ದ ವಾರ್ಡಿನ ಅಭಿಯಂತರರು ಮಾತನಾಡಿ ಸ್ಟ್ರಾಪ್ ಗೋಡೋನ್ ತೆರವುಗೊಳಿಸಲು ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.
- ಸಭೆಯಲ್ಲಿ ಹಾಜರಾಗಿದ್ದ ಶ್ರೀ. ಅನೀಸ್ ಅಹಮದ್ ರವರು ಮಾತನಾಡಿ ಕೃಷ್ಣಪ್ಪ ಗಾರ್ಡನ್ 4ನೇ ಮುಖ್ಯರಸ್ತೆಯಲ್ಲಿ ಚರಂಡಿ ಕಾಮಗಾರಿಯನ್ನು ನಿರ್ವಹಿಸಲು ಮೌಖಿಕವಾಗಿ ಹಾಗೂ ಪತ್ರ ಮುಖೇನ ಕೋರಿರುತ್ತಾರೆ. ಈ ಬಗ್ಗೆ ವಾರ್ಡಿನ ಅಭಿಯಂತರರು ಉತ್ತರಿಸಿ ಸದರಿ ಕಾಮಗಾರಿಗೆ ಸಂಬಂಧಪಟ್ಟಂತೆ ಅಂದಾಜು ಪಟ್ಟಿಯನ್ನು ತಯಾರಿಸಿ ಕಡತವನ್ನು ಸಲ್ಲಿಸುವುದಾಗಿ ಸಭೆಗೆ ತಿಳಿಸಿದರು.
- ಸಭೆಯಲ್ಲಿ ಹಾಜರಾಗಿದ್ದ ಶ್ರೀ. ಅನೀಸ್ ಅಹಮದ್ ರವರು ಮಾತನಾಡಿ ಕೃಷ್ಣಪ್ಪ ಗಾರ್ಡನ್ 4ನೇ ಮುಖ್ಯರಸ್ತೆಯಲ್ಲಿ ಸ್ಟ್ರೀಟ್ ಲೈಟ್ ವ್ಯವಸ್ಥೆ ಕಲ್ಪಿಸಿಕೊಡಬೇಕೆಂದು ಕೋರಿರುತ್ತಾರೆ. ಈ ಬಗ್ಗೆ ಅಧ್ಯಕ್ಷರು ಮಾತನಾಡಿ ಸಂಬಂಧಪಟ್ಟ ಇಲಾಖೆಯವರಿಗೆ ಕ್ರಮ ವಹಿಸಲು ಸೂಚಿಸುವುದಾಗಿ ತಿಳಿಸಿದರು.

ಅಂತಿಮವಾಗಿ ಅಧ್ಯಕ್ಷರು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಂಡು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| (ನರಸಿಂಹಯ್ಯ ಎನ್) | Laralakshmi (ವರಲಕ್ಷ್ಮಮ್ಮ ಎಲ್) |
| ಕಾರ್ಯದರ್ಶಿ | ನೋಡಲ್ ಅಧಿಕಾರಿ |
| ವಾರ್ಡ್-153 ಜಯನಗರ | ವಾರ್ಡ್-153 ಜಯನಗರ |



Scanned with CamScanner